**ಫ್ಯಾಕ್ಸ್ : 0816-2255761**
**ದೂರವಾಣಿ : 2272280**

# ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರ

ಬೆಳಗುಂಬ ರಸ್ತೆ, ತುಮಕೂರು – 572 103

## ಅಂತಿಮ ವಿನ್ಯಾಸ ಅನುಮೋದನೆ ಆದೇಶ

**ವಿಷಯ :** ತುಮಕೂರು ನಗರದ **ಅಂತರಸನಹಳ್ಳಿ** ಗ್ರಾಮದ ಸರ್ವೆ ನಂಬರ್ 33/2 ರಲ್ಲಿ **ಒಟ್ಟು 0-20 ಗುಂಟೆ** ಪ್ರದೇಶಕ್ಕೆ ವಾಸದ ಉಪಯೋಗಕ್ಕೆ ಅಂತಿಮ ವಿನ್ಯಾಸ ನಕ್ಷೆ ಅನುಮೋದನೆ ಕೋರಿರುವ ಬಗ್ಗೆ.

**ಉಲ್ಲೇಖ :**
1. ಶ್ರೀ ದೊರೆಸ್ವಾಮಯ್ಯ ಇವರ ಮನವಿ ದಿನಾಂಕ **27-06-2011**
2. ಮಾನ್ಯ ಜಿಲ್ಲಾಧಿಕಾರಿಗಳ ಕಛೇರಿಯ ಆದೇಶ ಸಂಖ್ಯೆ **ಎಎಲ್‌ಎನ್(ಟಿಎಂಕೆ)/ ಸಿಆರ್/49/2011-12 ದಿನಾಂಕ 20-06-2011**
3. ದಿನಾಂಕ **29-07-2011** ರ ಪ್ರಾಧಿಕಾರದ ಸಭೆಯ ವಿಷಯ ಸಂಖ್ಯೆ **66** ರ ನಿರ್ಣಯ
4. ಪ್ರಾಧಿಕಾರಕ್ಕೆ ಪರಿಶೀಲನಾ ಶುಲ್ಕ, ಉತ್ತಮತೆ ಶುಲ್ಕ, ಉದ್ಯಾನವನ ಹಾಗೂ ಸಿ.ಎ.ವಿನಾಯ್ತಿ ಮತ್ತು ಸ್ಲಂಸೆಸ್ ಶುಲ್ಕ ಪಾವತಿಸಿದ ರಸೀದಿ ಸಂಖ್ಯೆ **23720 ರೂ.13,41,420** (ಹದಿಮೂರು ಲಕ್ಷದ ನಲವತ್ತೊಂದು ಸಾವಿರದ ನಾಲ್ಕು ನೂರ ಇಪ್ಪತ್ತು ರೂಪಾಯಿಗಳು ಮಾತ್ರ) ದಿನಾಂಕ **25-01-2012** ಮತ್ತು ಮೇಲ್ವಿಚಾರಣಾ ಶುಲ್ಕ ಪಾವತಿಸಿದ ರಸೀದಿ ಸಂಖ್ಯೆ **25669 ರೂ.22,000** (ಇಪ್ಪತ್ತೆರಡು ಸಾವಿರ ರೂಪಾಯಿಗಳು ಮಾತ್ರ) ದಿನಾಂಕ **25-08-2012**
5. ಈ ಕಛೇರಿಯ ಪ್ರಾಥಮಿಕ ಅನುಮೋದನೆ ಆದೇಶ ಸಂಖ್ಯೆ ತುನಪ್ರಾ/ನಯೋ/ ವಿನ್ಯಾಸ/92/2011-12 ದಿನಾಂಕ 02-03-2012
6. ಪ್ರಾಥಮಿಕ ಅನುಮೋದನೆ ವಿನ್ಯಾಸ ನಕ್ಷೆಯಂತೆ ಅಭಿವೃದ್ಧಿ ಕಾರ್ಯಗಳನ್ನು ಪೂರ್ಣಗೊಳಿಸಿರುವ ಬಗ್ಗೆ ತಾಂತ್ರಿಕ ವಿಭಾಗದ ದೃಢೀಕರಣ ದಿನಾಂಕ 04-12-2012
7. ದಿನಾಂಕ **22-12-2012** ರ ಪ್ರಾಧಿಕಾರದ ಸಭೆಯ ವಿಷಯ ಸಂಖ್ಯೆ **11** ರ ನಿರ್ಣಯ
8. ರಸ್ತೆಗಳ ಪ್ರದೇಶವನ್ನು ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಹಸ್ತಾಂತರಿಸಿ ನೊಂದಾಯಿಸಿ ಕೊಟ್ಟಿರುವ ದಾನಪತ್ರದ ದಸ್ತಾವೇಜು ನಂ.**20943** ದಿನಾಂಕ **17-01-2013**
9. ಸರ್ಕಾರದ ಸುತ್ತೋಲೆಯ ಸಂಖ್ಯೆ ನಅಇ / 112 / ಬೆಂರೂಪ್ರಾ / 2005 ದಿನಾಂಕ 26-05-2005

* * * * *

**ಪ್ರಸ್ತಾವನೆ :-**

ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರಲ್ಲಿನ ಅರ್ಜಿದಾರರ ಮನವಿಯಲ್ಲಿ ತುಮಕೂರು ನಗರದ **ಅಂತರಸನಹಳ್ಳಿ** ಗ್ರಾಮದ ಸರ್ವೆ ನಂಬರ್ **33/2** ರಲ್ಲಿ **ಒಟ್ಟು 0-20 ಗುಂಟೆ** ಪ್ರದೇಶಕ್ಕೆ ವಸತಿ ವಿನ್ಯಾಸ ನಕ್ಷೆಯನ್ನು ಅನುಮೋದಿಸಲು ಕೋರಲಾಗಿದೆ.

ಉಲ್ಲೇಖ (3) ರ ನಿರ್ಣಯದಂತೆ, ಉಲ್ಲೇಖ (4) ರಲ್ಲಿ ಅರ್ಜಿದಾರರು ಶುಲ್ಕ ಪಾವತಿಸಿರುತ್ತಾರೆ. ಉಲ್ಲೇಖ (5) ರಲ್ಲಿ ಪ್ರಸ್ತಾವಿತ ಪ್ರದೇಶಕ್ಕೆ ಪ್ರಾಧಿಕಾರದಿಂದ ಪ್ರಾಥಮಿಕ ಅನುಮೋದನೆ ವಿನ್ಯಾಸ ನಕ್ಷೆ ತಯಾರಿಸಿ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸಲು ಶೇಕಡ 60 ರಷ್ಟು ನಿವೇಶನಗಳನ್ನು ಮಾರಾಟಕ್ಕೆ ಬಿಡುಗಡೆ ಮಾಡಲಾಗಿತ್ತು. ಉಲ್ಲೇಖ (6) ರ ತಾಂತ್ರಿಕ ಶಾಖೆಯ ವರದಿಯಂತೆ ಬಡಾವಣೆಯಲ್ಲಿ ಡಾಂಬರೀಕರಣ, ಸಿವಿಲ್ ಅಭಿವೃದ್ಧಿ ಕೆಲಸಗಳು, ನೀರು ಸರಬರಾಜು ವ್ಯವಸ್ಥೆ, ಒಳಚರಂಡಿ ವ್ಯವಸ್ಥೆ, ವಿದ್ಯುತ್ ವ್ಯವಸ್ಥೆ ಮುಂತಾದ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿ ಪಡಿಸಲಾಗಿರುತ್ತದೆ.

ಉಲ್ಲಖ (7) ರ ಪ್ರಾಧಿಕಾರದ ಸಭೆಯ ನಿರ್ಣಯದಂತೆ, ಉಲ್ಲೇಖ (8) ರಲ್ಲಿ ರಸ್ತೆಗಳ ಪ್ರದೇಶವನ್ನು ದಾನಪತ್ರದ ಮೂಲಕ ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರ, ತುಮಕೂರು ಇವರಿಗೆ ಹಸ್ತಾಂತರಿಸಲಾಗಿರುತ್ತದೆ.

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17(2) ರನ್ವಯ ಹಾಗೂ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆ 1987 ರ ಕಲಂ 34 ರಂತೆ ಅನುಮೋದಿಸಬಹುದಾಗಿರುತ್ತದೆ. ಉಲ್ಲೇಖ (9) ರ ಸರ್ಕಾರದ ಸುತ್ತೋಲೆಯಂತೆ ವಿನ್ಯಾಸದ ಶೇಕಡ 60 ರಷ್ಟು ನಿವೇಶನಗಳು ಅಂದರೆ D2, D3, D4, D8, D9, D10 ಮತ್ತು D11 ಒಟ್ಟು **07** ನಿವೇಶನಗಳನ್ನು ಉಲ್ಲೇಖ (5) ರ ಪ್ರಾಧಿಕಾರದ ಆದೇಶದಂತೆ ಬಿಡುಗಡೆಗೊಳಿಸಲಾಗಿತ್ತು. ಉಳಿದ ಶೇಕಡ 40 ರಷ್ಟು ನಿವೇಶನಗಳು ಅಂದರೆ D1, D5, D6, D7 ಮತ್ತು D12 ಒಟ್ಟು **05** ನಿವೇಶನಗಳನ್ನು ಬಿಡುಗಡೆಗೊಳಿಸಿ ಅಂತಿಮ ವಿನ್ಯಾಸ ಅನುಮೋದನೆಯಾಗಬೇಕಾಗಿದ್ದು, ಕೆಳಕಂಡಂತೆ ಆದೇಶಿಸಿದೆ.

ಸಂಖ್ಯೆ ತುನಪ್ರಾ/ನಯೋ/ವಿನ್ಯಾಸ/92/2011-12 ದಿನಾಂಕ : 18-01-2012

ಅಂತಿಮ ವಿನ್ಯಾಸ ನಕ್ಷೆ ದೃಢೀಕರಣ 2223

## ಆದೇಶ

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರದ ಸುತ್ತೋಲೆಯ ಸಂಖ್ಯೆ ನಅಇ / 112 / ಬೆಂರೂಪ್ರಾ / 2005 ದಿನಾಂಕ 26-05-2005 ರಂತೆ ತುಮಕೂರು ನಗರದ **ಅಂತರಸನಹಳ್ಳಿ** ಗ್ರಾಮದ ಸರ್ವೆ ನಂಬರ್ **33/2** ರಲ್ಲಿ **ಒಟ್ಟು 0-20 ಗುಂಟೆ** ಪ್ರದೇಶದಲ್ಲಿ ರಚಿಸಲಾಗಿರುವ ವಸತಿ ಉದ್ದೇಶದ ವಿನ್ಯಾಸವನ್ನು ಅಂತಿಮವಾಗಿ ಅನುಮೋದಿಸಿದೆ. ಈ ವಿನ್ಯಾಸದಲ್ಲಿನ ಶೇಕಡ 40 ರಷ್ಟು ನಿವೇಶನಗಳ ಸಂಖ್ಯೆ ಅಂದರೆ D1, D5, D6, D7 ಮತ್ತು D12 ಒಟ್ಟು **05** ನಿವೇಶನಗಳನ್ನು ಬಿಡುಗಡೆ ಮಾಡಲಾಗಿರುತ್ತದೆ. ಈ ಅಂತಿಮ ವಿನ್ಯಾಸ ಅನುಮೋದನೆ ಮತ್ತು ನಿವೇಶನ ಬಿಡುಗಡೆಯು ಈ ಕೆಳಕಂಡ ಷರತ್ತಿಗೊಳಪಟ್ಟಿರುತ್ತದೆ.

**ನಿಂಬಧನೆಗಳು:-**

1. ವಿನ್ಯಾಸದಲ್ಲಿನ ನಿವೇಶನಗಳನ್ನು ಅನುಮೋದಿಸಲಾದ ಉದ್ದೇಶಕ್ಕೆ ಉಪಯೋಗಿಸತಕ್ಕದ್ದು. ನಿವೇಶನಗಳನ್ನು ಉಪವಿಭಜಿಸುವುದು / ಒಟ್ಟು ಗೂಡಿಸುವುದನ್ನು, ಅಳತೆಗಳನ್ನು ಮಾರ್ಪಾಡು ಮಾಡುವುದನ್ನಾಗಲೀ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೇ ಮಾಡತಕ್ಕದ್ದಲ್ಲ.
2. ವಿನ್ಯಾಸದಲ್ಲಿ ವಸತಿಗಾಗಿ **1466.00** ಚ.ಮೀ. (ಶೇಕಡ **72.42**; ರಸ್ತೆಗಳಿಗೆ **558.76** ಚ.ಮೀ. (ಶೇಕಡ **27.58** ಪ್ರದೇಶ ನಿಗಧಿಪಡಿಸಿದೆ. ವಸತಿ ವಿಸ್ತೀರ್ಣದಲ್ಲಿ ಅನುಮೋದಿತ ನಕ್ಷೆಯಲ್ಲಿ ತೋರಿಸಿರುವಂತೆ ಅನಿಯಮಿತ ಅಳತೆಯ **04** ನಿವೇಶನಗಳಿರುತ್ತವೆ.
3. ನಿವೇಶನಗಳಲ್ಲಿ ಕಟ್ಟಡ ನಿರ್ಮಾಣಕ್ಕೆ ಮೊದಲು ಸ್ಥಳೀಯ ಸಂಸ್ಥೆಯಿಂದ ಅಗತ್ಯ ಕಟ್ಟಡ ಪರವಾನಗಿ / ಪ್ರಾರಂಭಿಕ ಪ್ರಮಾಣ ಪತ್ರ ಪಡೆದು ಅನುಮೋದಿತ ಕಟ್ಟಡ ನಕ್ಷೆಯಂತೆಯೇ ಕಟ್ಟಡ ನಿರ್ಮಿಸತಕ್ಕದ್ದು.
4. ಮೇಲ್ಕಂಡ ಯಾವುದೇ ನಿಬಂಧನೆಯನ್ನಾದರೂ ಪಾಲಿಸದೇ ಇದ್ದಲ್ಲಿ; ನೀಡಲಾದ ಮಾಹಿತಿ / ದಾಖಲಾತಿ ತಪ್ಪು ಎಂದು ಕಂಡು ಬಂದಲ್ಲಿ ವಿನ್ಯಾಸವನ್ನು ಯಾವುದೇ ತಿಳುವಳಿಕೆ ನೀಡದೇ ರದ್ದುಪಡಿಸುವ ಅಥವಾ ಇತರೇ ಯಾವುದೇ ನಿಬಂಧನೆ ವಿಧಿಸುವ ಅಧಿಕಾರ ಪ್ರಾಧಿಕಾರಕ್ಕೆ ಇರುತ್ತದೆ.
5. ವಿನ್ಯಾಸ ಪ್ರದೇಶದ ಗಡಿಗಳು, ನಿವೇಶನದ ಗಡಿಗಳಿಗೆ ಸಂಬಂಧಿಸಿದಂತೆ ಯಾವುದೇ ತಂಟೆ ತಕರಾರು ಉಂಟಾದಲ್ಲಿ ವಿನ್ಯಾಸ/ನಿವೇಶನ ಮಾಲೀಕರೇ ತಮ್ಮ ಸ್ವಂತ ಜವಾಬ್ದಾರಿಯಲ್ಲಿ ಬಗೆಹರಿಸಿಕೊಳ್ಳತಕ್ಕದ್ದು ಹಾಗೂ ಈ ಅನುಮತಿಯ ಸಿವಿಲ್ ವ್ಯಾಜ್ಯಗಳಿಗೆ ಹೊರತಾಗಿದೆ.

ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ,
ತುಮಕೂರು.

**ಶ್ರೀ ದೊರೆಸ್ವಾಮಯ್ಯ**
ಬಿನ್ ರಂಗಸ್ವಾಮಯ್ಯ
ಅಂತರಸನಹಳ್ಳಿ
ತುಮಕೂರು.

**ಪ್ರತಿಯನ್ನು :-**

1. ಪೌರಾಯುಕ್ತರು, ನಗರಸಭೆ, ತುಮಕೂರು ಇವರಿಗೆ ವಿನ್ಯಾಸ ನಕ್ಷೆಯೊಂದಿಗೆ ರವಾನಿಸುತ್ತಾ ವಿನ್ಯಾಸದ ನಕ್ಷೆಯಂತೆ ನಿಯಮಾನುಸಾರ ನಿವೇಶನಗಳ ಖಾತಾ ಮಾಡಬಹುದು ಹಾಗೂ ಕಟ್ಟಡ ನಿರ್ಮಾಣಕ್ಕೆ ಅನುಮತಿಸಬಹುದೆಂದು ತಿಳಿಸಲಾಗಿದೆ.
2. ಉಪನೋಂದಣಾಧಿಕಾರಿಗಳು, ತುಮಕೂರು ತಾಲ್ಲೂಕು, ತುಮಕೂರು ರವರಿಗೆ ಮಾಹಿತಿಗಾಗಿ ಕಳುಹಿಸಿದೆ.
3. ಕಛೇರಿ ಪ್ರತಿ.







## LAND USE ANALYSIS

| USE | AREA IN SQM | % |
|---|---|---|
| RESIDENTIAL | 1466.00 | 72.42 |
| ROADS | 558.16 | 27.58 |
| TOTAL | 2024.16 | 100.0 |

SCALE :1:600

GOVERNMENT OF KARNATAKA

TUMKUR URBAN DEVELOPEMENT AUTHORITY
TUMKUR

TOWN PLANNING MEMBER
TUDA TUMKUR

COMMISSIONER
TUDA TUMKUR